ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/112/ಬ್ಯಾಕ್‌ಲಾಗ್/ನೇವಿ-2/2011-12(ಭಾಗ-4)

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:17.08.2022.

## ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/13/ಎಸ್‌ಬಿಸಿ/2001, ದಿನಾಂಕ:21.11.2001.
2) ಸರ್ಕಾರದ ಆದೇಶ ಸಂಖ್ಯೆ:ಇಡಿ/357/ಯುಪಿಸಿ/2001, ದಿ:19.12.2002.
3) ಸರ್ಕಾರದ ಪತ್ರ ಸಂಖ್ಯೆ:ಇಡಿ/56/ಯುಪಿಸಿ/2019(ಇ), ದಿನಾಂಕ:18.07.2022.

** ** **

ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ಮೀಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ಪ್ರಕಟಿಸಲಾಗಿದೆ. ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳನ್ನು ಅನುಬಂಧ-1 ರಲ್ಲಿ ಹಾಗೂ ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಅನುಬಂಧ-2 ರಲ್ಲಿ ಗುರುತಿಸಿ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಸದರಿ ಆದೇಶದಲ್ಲಿ ಗುರುತಿಸಲಾದ ಹುದ್ದೆಗಳನ್ನು ಹೊಸದಾಗಿ ಸೃಜಿಸಲಾಗಿರುವುದಿಲ್ಲ. ಸದರಿ ಹುದ್ದೆಗಳನ್ನು ಮಂಜೂರಾದ ಖಾಲಿ ಹುದ್ದೆ ತೆರವಾದಲ್ಲಿ ಆ ಹುದ್ದೆಗೆದುರಾಗಿ ತುಂಬಬೇಕಾಗಿರುತ್ತದೆ.

ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ಗುರುತಿಸಿರುವ ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ ಇನ್ನೂ ಹಲವಾರು ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿಯಾಗದೇ ಉಳಿದಿರುತ್ತದೆ. ಬ್ಯಾಕ್‌ಲಾಗ್ ಹುದ್ದೆಗಳನ್ನು ಆದ್ಯತೆಯ ಮೇರೆಗೆ ಭರ್ತಿ ಮಾಡಬೇಕಾಗಿರುವುದು ಅತ್ಯವಶ್ಯವಿರುತ್ತದೆ.

ಆದರೆ, ಕೋವಿಡ್-19 ರ ಹಿನ್ನೆಲೆಯಲ್ಲಿ ಸರ್ಕಾರವು ಹೊರಡಿಸಿದ್ದ ದಿನಾಂಕ:13.08.2020 ರ ಪತ್ರ ಸಂಖ್ಯೆ:ಇಡಿ/98/ಯುಪಿಸಿ/2020ರಲ್ಲಿ ಆರ್ಥಿಕ ಮಿತವ್ಯಯ ಆದೇಶವನ್ನು ಜಾರಿಗೊಳಿಸಿದ್ದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬಾಕಿ ಇರುವ ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖೆಯು ಕ್ರಮ ಕೈಗೊಂಡಿರುವುದಿಲ್ಲ.

ಪ್ರಸ್ತುತ ಉಲ್ಲೇಖ (3)ರ ಸರ್ಕಾರದ ಪತ್ರದಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅಗತ್ಯವಿರುವ ಎಲ್ಲಾ ವಿವರವಾದ ದಾಖಲೆಯೊಂದಿಗೆ ಹಾಗೂ ಸ್ಪಷ್ಟ ಶಿಫಾರಸ್ಸಿನೊಂದಿಗೆ ಪ್ರತ್ಯೇಕ ಪ್ರಸ್ತಾವನೆಗಳನ್ನು ಚೆಕ್‌ಲಿಸ್ಟ್‌ನೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ನಿರ್ದೇಶಿಸಲಾಗಿದೆ. ಆದ್ದರಿಂದ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ತುರ್ತಾಗಿ ಅಗತ್ಯ ಕ್ರಮ ಕೈಗೊಳ್ಳಬೇಕಾಗಿರುವುದು ಅವಶ್ಯವಿರುತ್ತದೆ.

ಈ ಹಿಂದೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿ ಆಡಳಿತ ಮಂಡಳಿಗಳಿಂದ ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರಿಂದ ಈ ಕಛೇರಿಯಲ್ಲಿ ಸ್ವೀಕೃತವಾಗಿದ್ದ ಪ್ರಸ್ತಾವನೆಗಳಲ್ಲಿ ಹಲವಾರು ನ್ಯೂನತೆಗಳಿದ್ದು, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಸಲ್ಲಿಕೆಯಾಗುವ ಪ್ರಸ್ತಾವನೆಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರು ಪರಿಶೀಲಿಸದೇ ಸ್ಪಷ್ಟ ಅಭಿಪ್ರಾಯ ನೀಡದೇ ಯಥಾವತ್ತಾಗಿ ಮುಂದಿನ ಅಗತ್ಯ ಕ್ರಮಕ್ಕಾಗಿ ಎಂದು ಪ್ರತ್ಯೇಕ ಮುಖಪತ್ರ ಲಗತ್ತಿಸಿ, ಈ ಕಛೇರಿಗೆ ಕಳುಹಿಸಿದ್ದು, ಇದರಿಂದಾಗಿ ವೃಥಾ ಪತ್ರ ವ್ಯವಹಾರಗಳಿಂದಾಗಿ ಬ್ಯಾಕ್‌ಲಾಗ್ ಹುದ್ದೆ ಭರ್ತಿ ಮಾಡಲು ಅನಗತ್ಯ ವಿಳಂಬವಾಗಿ ನ್ಯಾಯಾಲಯ ಮತ್ತು ಅನುಸೂಚಿತ ಜಾತಿ & ಅನುಸೂಚಿತ ಪಂಗಡಗಳ ಆಯೋಗದಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ.

ಆದ್ದರಿಂದ ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಈ ಕೆಳಕಾಣಿಸಿದ ಸೂಚನೆಗಳನ್ನು ಕಾಲೇಜುಗಳ ಆಡಳಿತ ಮಂಡಳಿ, ಪ್ರಾಂಶುಪಾಲರು ಮತ್ತು ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಕಟ್ಟುನಿಟ್ಟಾಗಿ ಪಾಲಿಸಿ ಕೂಡಲೇ ಬಾಕಿ ಉಳಿದಿರುವ ಎಲ್ಲಾ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಈ ಕೆಳಕಂಡ ಸೂಚನೆ/ಮಾರ್ಗಸೂಚಿಗಳನ್ನು ಅನುಸರಿಸಿ ತುರ್ತಾಗಿ ಕ್ರಮ ಜರುಗಿಸಲು ಸೂಚಿಸಲಾಗಿದೆ.

1) ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳನ್ನು ಹೊಸದಾಗಿ ಸೃಜಿಸಲಾಗಿರುವುದಿಲ್ಲ. ಮಂಜೂರಾದ ಖಾಲಿ ಹುದ್ದೆಗಳು ತೆರವಾದಲ್ಲಿ ಆ ಹುದ್ದೆಗಳನ್ನು ಬ್ಯಾಕ್‌ಲಾಗ್ ಅಡಿ ಭರ್ತಿ ಮಾಡಬೇಕಾಗಿರುತ್ತದೆ. ಆದ್ದರಿಂದ ಆಡಳಿತ ಮಂಡಳಿಗಳು ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಾಗ ಸಂಬಂಧಪಟ್ಟ ಹುದ್ದೆಗೆ ಮಂಜೂರಾದ, ಕರ್ತವ್ಯ ನಿರ್ವಹಿಸುತ್ತಿರುವ, ಖಾಲಿ ಹುದ್ದೆಗಳ ಬಗ್ಗೆ ಮಾಹಿತಿ ಹಾಗೂ ಅನುದಾನಿತ ಕಾರ್ಯಭಾರ (ಪ್ರಯೋಗಾಲಯ ತರಗತಿಗಳನ್ನು ಹೊಂದಿರುವ ವಿಷಯಗಳಲ್ಲಿ 20 ಗಂಟೆ ಮತ್ತು ಪ್ರಯೋಗಾಲಯ ತರಗತಿಗಳನ್ನು ಹೊಂದಿಲ್ಲದ ವಿಷಯಗಳಲ್ಲಿ 16 ಗಂಟೆ), ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳೊಂದಿಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಈ ಸುತ್ತೋಲೆ ತಲುಪಿದ 03 ದಿನದೊಳಗಾಗಿ ಪ್ರಸ್ತಾವನೆ ಸಲ್ಲಿಸತಕ್ಕದ್ದು.

2) ಆಡಳಿತ ಮಂಡಳಿಗಳಿಂದ ಸ್ವೀಕೃತಗೊಂಡ ಪ್ರಸ್ತಾವನೆಯನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ನಿಯಮಾನುಸಾರ ಕೂಲಂಕಷವಾಗಿ ಪರಿಶೀಲಿಸಿ, ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಮಂಜೂರಾದ ಖಾಲಿ ಹುದ್ದೆ, ಪೂರ್ಣಕಾಲಿಕ ಅನುದಾನಿತ ಕಾರ್ಯಭಾರ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. (ಪ್ರಯೋಗಾಲಯ ತರಗತಿಗಳನ್ನು ಹೊಂದಿರುವ ವಿಷಯಗಳಲ್ಲಿ 20 ಗಂಟೆ ಮತ್ತು ಪ್ರಯೋಗಾಲಯ ತರಗತಿಗಳನ್ನು ಹೊಂದಿಲ್ಲದ ವಿಷಯಗಳಲ್ಲಿ 16 ಗಂಟೆ ಕಾರ್ಯಭಾರ ಕಡ್ಡಾಯವಾಗಿರಬೇಕು. ಕಾರ್ಯಭಾರವನ್ನು ಪರಿಗಣಿಸುವಾಗ ಕಾರ್ಯಭಾರ ಪಟ್ಟಿಯಲ್ಲಿ ಪ್ರತಿ ತರಗತಿವಾರು ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆಯನ್ನು ಗಣನೆಗೆ ತೆಗೆದುಕೊಳ್ಳಬೇಕು. ಒಂದು ವೇಳೆ ವಿದ್ಯಾರ್ಥಿಗಳ ಸಂಖ್ಯೆ ನಿಗದಿತ ಪ್ರಮಾಣಕ್ಕಿಂತ ಕಡಿಮೆಯಿದ್ದಲ್ಲಿ ಆ ತರಗತಿಯ ಕಾರ್ಯಭಾರವನ್ನು ಪರಿಗಣಿಸತಕ್ಕದ್ದಲ್ಲ.) ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಮಂಜೂರಾದ ಖಾಲಿ ಹುದ್ದೆ & ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಸಿಬ್ಬಂದಿ ರೂಪಿಕೆಯನ್ವಯ ಹುದ್ದೆ ಭರ್ತಿ ಮಾಡಬೇಕಾಗಿರುವುದು ಅವಶ್ಯಕತೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ನಂತರ ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ತಮ್ಮ ಕಛೇರಿ ಹಂತದಲ್ಲಿಯೇ ಸಂಬಂಧಪಟ್ಟ ಆಡಳಿತ ಮಂಡಳಿಗಳಿಗೆ 05 ದಿನದೊಳಗಾಗಿ ಅನುಮತಿ ನೀಡುವುದು.

3) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಯಿಂದ ಅನುಮತಿ ದೊರೆತ ನಂತರ ಆಡಳಿತ ಮಂಡಳಿಗಳು ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಕೂಡಲೇ ಕ್ರಮ ಕೈಗೊಳ್ಳುವುದು.

   - ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಯಿಂದ ಅನುಮತಿ ಪಡೆದ ನಂತರ ಒಂದು ವಾರದೊಳಗಾಗಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಆಡಳಿತ ಮಂಡಳಿಗಳು ಜಾಹಿರಾತು ಪ್ರಕಟಿಸುವುದು.
   - ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತ ಮಂಡಳಿಯು ದಿನಪತ್ರಿಕೆಗಳಲ್ಲಿ ಜಾಹಿರಾತು ಪ್ರಕಟಿಸುವ ದಿನಾಂಕದಂದು ಜಾರಿಯಲ್ಲಿರುವ ಸರ್ಕಾರಿ, ಯು.ಜಿ.ಸಿ. ಹಾಗೂ ಇಲಾಖೆಯ ಆದೇಶ/ಸುತ್ತೋಲೆ/ಮಾರ್ಗಸೂಚಿಗಳನ್ವಯ ನಿಯಮಾನುಸಾರ ಕ್ರಮವಹಿಸತಕ್ಕದ್ದು ಹಾಗೂ ಜಾಹಿರಾತನ್ನು ರಾಜ್ಯಮಟ್ಟದ ಅತಿ ಹೆಚ್ಚು ಪ್ರಸಾರದ ಪ್ರಮುಖ ಕನ್ನಡ ಮತ್ತು ಆಂಗ್ಲಭಾಷಾ ದಿನಪತ್ರಿಕೆಗಳಲ್ಲಿ ಪ್ರಕಟಿಸಬೇಕು & ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಒಂದು ಅರ್ಜಿಯನ್ನು ಆಡಳಿತ ಮಂಡಳಿಗೆ ಹಾಗೂ ಮತ್ತೊಂದು ಅರ್ಜಿಯನ್ನು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಸಲ್ಲಿಸುವಂತೆ ಜಾಹಿರಾತಿನಲ್ಲಿ ಪ್ರಕಟಿಸುವುದು.

- ಕೋವಿಡ್-19 ರ ಪ್ರಯುಕ್ತ ಆರ್ಥಿಕ ಮಿತವ್ಯಯ ಆದೇಶ ಜಾರಿಗೊಳ್ಳುವ ಪೂರ್ವದಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗಾಗಿ ಈಗಾಗಲೇ ಜಾಹಿರಾತು ಪ್ರಕಟಿಸಿ ನಿಯಮಾನುಸಾರ ಆಯ್ಕೆ ಪ್ರಕ್ರಿಯೆಯನ್ನು ನಡೆಸಿರುವಂತಹ ಪ್ರಕರಣಗಳಿಗೆ ಮತ್ತೊಮ್ಮೆ ಜಾಹಿರಾತು ಪ್ರಕಟಿಸದೆ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸುವುದು.
- ಬೋಧಕರ ಬ್ಯಾಕ್‌ಲಾಗ್ ಹುದ್ದೆಯನ್ನು ಜಾಹಿರಾತುಗೊಳಿಸುವ ಮುನ್ನ ಹುದ್ದೆಗೆ ನಿಗದಿತ ಕನಿಷ್ಠ ಅನುದಾನಿತ ಕಾರ್ಯಭಾರ ಅಂದರೆ ಪ್ರಯೋಗಾಲಯ ತರಗತಿಗಳನ್ನು ಹೊಂದಿರುವ ವಿಷಯಗಳಲ್ಲಿ 20 ಗಂಟೆ ಮತ್ತು ಪ್ರಯೋಗಾಲಯ ತರಗತಿಗಳನ್ನು ಹೊಂದಿಲ್ಲದ ವಿಷಯಗಳಲ್ಲಿ 16 ಗಂಟೆ ಕಾರ್ಯಭಾರ ಕಡ್ಡಾಯವಾಗಿರಬೇಕು. ಪೂರ್ಣಕಾಲಿಕ ಕಾರ್ಯಭಾರ ಇಲ್ಲದಿರುವ ಹುದ್ದೆಗಳನ್ನು ಜಾಹಿರಾತಿನಲ್ಲಿ ಪ್ರಕಟಿಸುವಂತಿಲ್ಲ ಹಾಗೂ ಸದರಿ ಹುದ್ದೆಗಳನ್ನು ಭರ್ತಿ ಮಾಡತಕ್ಕದ್ದಲ್ಲ.
- ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಜಾಹಿರಾತುಗೊಳಿಸುವ ಮುನ್ನ ಸಂಬಂಧಪಟ್ಟ ಕಾಲೇಜುಗಳಲ್ಲಿ ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಸಿಬ್ಬಂದಿ ರೂಪಿಕೆಯನ್ವಯ ಸದರಿ ಕಾಲೇಜುಗಳಲ್ಲಿ ಹುದ್ದೆ ಭರ್ತಿ ಅವಶ್ಯಕತೆ ಇರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
- ಜಾಹಿರಾತಿನಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ಅನುಸಾರವಾಗಿ ನಿಗದಿಪಡಿಸಬೇಕಾಗಿರುವ ವಿದ್ಯಾರ್ಹತೆ, ವಯೋಮಿತಿ ಹಾಗೂ ಇನ್ನಿತರೆ ಮಾಹಿತಿಗಳನ್ನು ಈ ಕೆಳಕಂಡಂತೆ ಸ್ಪಷ್ಟವಾಗಿ ನಮೂದಿಸಬೇಕು.

| ಕ್ರಮ ಸಂಖ್ಯೆ | ಹುದ್ದೆ | ವಿದ್ಯಾರ್ಹತೆ | ವಯೋಮಿತಿ | ಷರಾ |
|---|---|---|---|---|
| 1 | 2 | 3 | 4 | 5 |
| 1 | ಸಹಾಯಕ ಪ್ರಾಧ್ಯಾಪಕರು, ದೈಹಿಕ ಶಿಕ್ಷಣ ನಿರ್ದೇಶಕರು ಮತ್ತು ಗ್ರಂಥಪಾಲಕರು | ಅಭ್ಯರ್ಥಿಗಳು ಸಂಬಂಧಪಟ್ಟ ವಿಷಯದಲ್ಲಿ ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ 50% ಅಂಕಗಳನ್ನು ಪಡೆದಿರಬೇಕು ಮತ್ತು ಎನ್.ಇ.ಟಿ/ ಎಸ್.ಎಲ್.ಇ.ಟಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಪಿ.ಹೆಚ್.ಡಿ ಪದವಿಯನ್ನು ಪಡೆದಿರುವ ಅಭ್ಯರ್ಥಿಗಳಿಗೆ ಎನ್.ಇ.ಟಿ /ಎಸ್.ಎಲ್.ಇ.ಟಿ ಪರೀಕ್ಷೆಯಿಂದ ವಿನಾಯಿತಿ ಇರುತ್ತದೆ. ಪಿ.ಹೆಚ್.ಡಿ ಪದವಿಯನ್ನು ಕೋರ್ಸ್ ವರ್ಕ್‌ನೊಂದಿಗೆ ಪಡೆಯಬೇಕಾಗಿರುತ್ತದೆ. ಒಂದು ವೇಳೆ ದಿ:11.07.2009 ರ ಪೂರ್ವದಲ್ಲಿ ಪಿ.ಹೆಚ್.ಡಿ ಪದವಿ ಪಡೆದಿದ್ದಲ್ಲಿ/ಪಿ.ಹೆಚ್.ಡಿ ಪದವಿಗೆ ನೋಂದಣಿ ಮಾಡಿಸಿದ್ದಲ್ಲಿ ಅಂತಹ ಅಭ್ಯರ್ಥಿಗಳು ದಿ:04.05.2016 ರ ಯು.ಜಿ.ಸಿ. ಅಧಿಸೂಚನೆಯಲ್ಲಿ ಹೊರಡಿಸಿರುವ ನಿಯಮಗಳನ್ನು ಪೂರೈಸುವ ಷರತ್ತುಗಳಿಗೊಳಪಟ್ಟಿರುತ್ತದೆ. ದಿ:11.07.2009 ರ ನಂತರದ ಯಾವುದೇ ನೇಮಕಾತಿಗೆ ಎಂ.ಫಿಲ್ ವಿದ್ಯಾರ್ಹತೆ ಪರಿಗಣಿಸತಕ್ಕದ್ದಲ್ಲ. | ಕನಿಷ್ಠ 18 ವರ್ಷಗಳು ಗರಿಷ್ಠ 45 ವರ್ಷಗಳು | |
| 2 | ಪ್ರಥಮ ದರ್ಜೆ ಸಹಾಯಕರು | ಅಂಗೀಕೃತ ವಿಶ್ವವಿದ್ಯಾಲಯದಿಂದ ಪಡೆದಿರುವ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆಗಳು. | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಪದವಿಯ ತತ್ಸಮಾನ ವಿದ್ಯಾರ್ಹತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ/ 81/ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |
| 3 | ದ್ವಿತೀಯ ದರ್ಜೆ ಸಹಾಯಕರು | ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಗಳು | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಪಿ.ಯು.ಸಿ ವಿದ್ಯಾರ್ಹತೆಯ ತತ್ಸಮಾನತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ/ 81/ ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |

| ಕ್ರಮ ಸಂಖ್ಯೆ | ಹುದ್ದೆ | ವಿದ್ಯಾರ್ಹತೆ | ವಯೋಮಿತಿ | ಷರಾ |
|---|---|---|---|---|
| 1 | 2 | 3 | 4 | 5 |
| 4 | ಬೆರಳಚ್ಚುಗಾರರು | ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯೊಂದಿಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಸೀನಿಯರ್ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಿರಬೇಕು.(ಕನ್ನಡ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಬೇಕಾಗಿರುವುದು ಕಡ್ಡಾಯವಾಗಿರುತ್ತದೆ)<br>ಅಥವಾ<br>Diploma in Commercial Practice with Kannada Typewriting or possess an equivalent qualification. | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಪಿ.ಯು.ಸಿ ವಿದ್ಯಾರ್ಹತೆಯ ತತ್ಸಮಾನತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ/ 81/ ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |
| 5 | ಗುಮಾಸ್ತ-ಯಾ-ಬೆರಳಚ್ಚುಗಾರರು | ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯೊಂದಿಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಜೂನಿಯರ್ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಿರಬೇಕು. (ಕನ್ನಡ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಬೇಕಾಗಿರುವುದು ಕಡ್ಡಾಯವಾಗಿರುತ್ತದೆ) | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಪಿ.ಯು.ಸಿ ವಿದ್ಯಾರ್ಹತೆಯ ತತ್ಸಮಾನತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ/ 81/ ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |
| 6 | ಗ್ರಂಥಾಲಯ ಸಹಾಯಕರು | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯೊಂದಿಗೆ ಡಿಪ್ಲೋಮ ಇನ್ ಲೈಬ್ರರಿ ಸೈನ್ಸ್‌ನಲ್ಲಿ ಉತ್ತೀರ್ಣತೆ ಹೊಂದಿರಬೇಕು. | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಎಸ್.ಎಸ್.ಎಲ್.ಸಿ ತತ್ಸಮಾನತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ/ 81/ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |
| 7 | ಅಟೆಂಡರ್ | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನತೆ | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಎಸ್.ಎಸ್.ಎಲ್.ಸಿ ತತ್ಸಮಾನತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ/ 81/ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |
| 8 | ಪರಿಚಾರಕರು | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನತೆ | ಕನಿಷ್ಠ 18 ವರ್ಷಗಳು ಗರಿಷ್ಠ 40 ವರ್ಷಗಳು | ಎಸ್.ಎಸ್.ಎಲ್.ಸಿ ತತ್ಸಮಾನತೆ ಬಗ್ಗೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ/ 81/ಸೇವನೆ/2017, ದಿ:27.02.2018 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಲಾಗುವುದು. |

- ಮಂಜೂರಾದ ಖಾಲಿ ಹುದ್ದೆ, ಪೂರ್ಣಕಾಲಿಕ ಕಾರ್ಯಭಾರವಿದ್ದು, ನಿಯಮಾನುಸಾರ ಭರ್ತಿ ಮಾಡಬಹುದಾದ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಿದ ನಂತರ ಆಡಳಿತ ಮಂಡಳಿಗಳು ಈ ಕೆಳಕಂಡಂತೆ ನಿಯಮಾನುಸಾರ ನೇಮಕಾತಿ ಪ್ರಕ್ರಿಯೆ ನಡೆಸಿ ಸಂಪೂರ್ಣ ಮೂಲ ಹಾಗೂ ದೃಢೀಕೃತ ದಾಖಲೆಗಳೊಂದಿಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

- ಆಡಳಿತ ಮಂಡಳಿಯು ಅಭ್ಯರ್ಥಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ವಯೋಮಿತಿ ಆಧಾರದ ಮೇಲೆ ಅಂದರೆ ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳಿಗೆ 18 ರಿಂದ 29 ರವರೆಗೆ ಮತ್ತು 29 ರಿಂದ 45 ರವರೆಗಿನ ವಯೋಮಿತಿಯ ಒಳಗೆ ಬರುವ ಹಾಗೂ ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳಿಗೆ 18

ರಿಂದ 29 ರವರೆಗೆ ಮತ್ತು 29 ರಿಂದ 40 ರವರೆಗಿನ ವಯೋಮಿತಿಯೊಳಗೆ ಬರುವ ಅಭ್ಯರ್ಥಿಗಳ ಅರ್ಜಿಗಳನ್ನು ಪ್ರತಿಭಾ ಆಧಾರದ ಮೇರೆಗೆ ಪಟ್ಟಿ ಸಿದ್ಧಪಡಿಸಬೇಕು.

- ಬೋಧಕರ ಬ್ಯಾಕ್‌ಲಾಗ್ ಹುದ್ದೆಗೆ ಪ್ರತಿಭಾ ಪಟ್ಟಿ ಸಿದ್ಧಪಡಿಸುವಾಗ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗರಿಷ್ಟ ಅಂಕಗಳನ್ನು ಪಡೆದಿರುವ ಆಧಾರದ ಮೇರೆಗೆ ಪ್ರತಿಭಾ ಪಟ್ಟಿ ಸಿದ್ಧಪಡಿಸಬೇಕು. ಪ್ರತಿಭಾ ಪಟ್ಟಿಯನ್ನು ಸಿದ್ಧಪಡಿಸುವಾಗ 18-29 ರ ವಯೋಮಾನದಲ್ಲಿ ಬರುವ ಅಭ್ಯರ್ಥಿಗಳ ಪ್ರತಿಭಾ ಪಟ್ಟಿ & 29-45ರ ವಯೋಮಾನದಲ್ಲಿ ಬರುವ ಅಭ್ಯರ್ಥಿಗಳ ಪ್ರತಿಭಾ ಪಟ್ಟಿ ಎಂಬ ಎರಡು ಪ್ರತಿಭಾ ಪಟ್ಟಿಗಳನ್ನು ಸಿದ್ಧಪಡಿಸಬೇಕು. ಮೊದಲಿಗೆ 29 ರಿಂದ 45 ರ ವಯೋಮಾನದ ಅಭ್ಯರ್ಥಿಗಳ ಪ್ರತಿಭಾ ಪಟ್ಟಿಯಲ್ಲಿ ಬರುವ ಅರ್ಹ ಮೊದಲನೇ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು. ಒಂದು ವೇಳೆ 29 ರಿಂದ 45 ರ ವಯೋಮಾನದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಮಾತ್ರ 18 ರಿಂದ 29 ರ ವಯೋಮಾನದಲ್ಲಿ ಬರುವ ಅರ್ಹ ಮೊದಲನೇ ಅಭ್ಯರ್ಥಿಯನ್ನು ಆಯ್ಕೆ ಮಾಡಿ, **ಅಭ್ಯರ್ಥಿಯ ಆಯ್ಕೆಯನ್ನು ಆಡಳಿತ ಮಂಡಳಿಯ ಶಿಫಾರಸ್ಸು ಹಾಗೂ ಠರಾವಿನೊಂದಿಗೆ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸಬೇಕು. ಬ್ಯಾಕ್‌ಲಾಗ್ ಹುದ್ದೆ ಭರ್ತಿ ಸಂದರ್ಭದಲ್ಲಿ ಪ್ರತಿಭಾ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆ ನಡೆಯಬೇಕು. ಯಾವುದೇ ಕಾರಣಕ್ಕೂ ಸಂದರ್ಶನ ನಡೆಸುವಂತಿಲ್ಲ.**

- ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗೆ ಪ್ರತಿಭಾ ಪಟ್ಟಿ ಸಿದ್ಧಪಡಿಸುವಾಗ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗರಿಷ್ಟ ಅಂಕಗಳನ್ನು ಪಡೆದಿರುವ ಆಧಾರದ ಮೇರೆಗೆ ಪ್ರತಿಭಾ ಪಟ್ಟಿ ಸಿದ್ಧಪಡಿಸಬೇಕು. (ಬೆರಳಚ್ಚುಗಾರರು, ಗುಮಾಸ್ತ-ಯಾ-ಬೆರಳಚ್ಚುಗಾರರು ಬ್ಯಾಕ್‌ಲಾಗ್ ಹುದ್ದೆಗೆ ಅಭ್ಯರ್ಥಿಯು ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳು ಮತ್ತು ಸಂಬಂಧಪಟ್ಟ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳನ್ನು ಒಟ್ಟುಗೂಡಿಸಿ ಸರಾಸರಿ ಅಂಕಗಳ ಆಧಾರದ ಮೇಲೆ ಪ್ರತಿಭಾ ಪಟ್ಟಿ ಸಿದ್ಧಪಡಿಸಬೇಕು. ಅದೇ ರೀತಿ ಗ್ರಂಥಾಲಯ ಸಹಾಯಕರ ಹುದ್ದೆಗೆ ಅಭ್ಯರ್ಥಿಯು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳು ಮತ್ತು ಡಿಪ್ಲೋಮೋ ಇನ್ ಲೈಬ್ರರಿ ಸೈನ್ಸ್‌ನಲ್ಲಿ ಪಡೆದಿರುವ ಅಂಕಗಳನ್ನು ಒಟ್ಟುಗೂಡಿಸಿ ಸರಾಸರಿ ಅಂಕಗಳ ಆಧಾರದ ಮೇಲೆ ಪ್ರತಿಭಾ ಪಟ್ಟಿ ಸಿದ್ಧಪಡಿಸಬೇಕು.) ಪ್ರತಿಭಾ ಪಟ್ಟಿಯನ್ನು ಸಿದ್ಧಪಡಿಸುವಾಗ 18-29ರ ವಯೋಮಾನದಲ್ಲಿ ಬರುವ ಅಭ್ಯರ್ಥಿಗಳ ಪ್ರತಿಭಾ ಪಟ್ಟಿ & 29-40ರ ವಯೋಮಾನದಲ್ಲಿ ಬರುವ ಅಭ್ಯರ್ಥಿಗಳ ಪ್ರತಿಭಾ ಪಟ್ಟಿ ಎಂಬ ಎರಡು ಪ್ರತಿಭಾ ಪಟ್ಟಿಗಳನ್ನು ಸಿದ್ಧಪಡಿಸಬೇಕು. ಮೊದಲಿಗೆ 29 ರಿಂದ 40 ರ ವಯೋಮಾನದ ಅಭ್ಯರ್ಥಿಗಳ ಪ್ರತಿಭಾ ಪಟ್ಟಿಯಲ್ಲಿ ಬರುವ ಅರ್ಹ ಮೊದಲನೇ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು. ಒಂದು ವೇಳೆ 29 ರಿಂದ 40 ರ ವಯೋಮಾನದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಮಾತ್ರ 18-29 ರ ವಯೋಮಾನದಲ್ಲಿ ಬರುವ ಅರ್ಹ ಮೊದಲನೇ ಅಭ್ಯರ್ಥಿಯನ್ನು ಆಯ್ಕೆ ಮಾಡಿ, **ಅಭ್ಯರ್ಥಿಯ ಆಯ್ಕೆಯನ್ನು ಆಡಳಿತ ಮಂಡಳಿಯ ಶಿಫಾರಸ್ಸು ಹಾಗೂ ಠರಾವಿನೊಂದಿಗೆ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸಬೇಕು. ಬ್ಯಾಕ್‌ಲಾಗ್ ಹುದ್ದೆ ಭರ್ತಿ ಸಂದರ್ಭದಲ್ಲಿ ಪ್ರತಿಭಾ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆ ನಡೆಯಬೇಕು. ಯಾವುದೇ ಕಾರಣಕ್ಕೂ ಸಂದರ್ಶನ ನಡೆಸುವಂತಿಲ್ಲ.**

- ಆಡಳಿತ ಮಂಡಳಿಯು ಮೇಲ್ಕಾಣಿಸಿದಂತೆ ಸಿದ್ಧಪಡಿಸಿರುವ ಪ್ರತಿಭಾ ಪಟ್ಟಿಯೊಂದಿಗೆ ಬ್ಯಾಕ್‌ಲಾಗ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ಮೂಲ ಅಂಕಪಟ್ಟಿ ಹಾಗೂ ದೃಢೀಕೃತ ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಸಲ್ಲಿಸಬೇಕು.
- ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಾಗ ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/13/ ಎಸ್.ಬಿ.ಸಿ/2001, ದಿನಾಂಕ:21.11.2001 ರಲ್ಲಿ ನೀಡಿರುವ ಅಗತ್ಯ ಮಾರ್ಗಸೂಚಿಗಳನ್ನು ಹಾಗೂ

ತದನಂತರ ಸರ್ಕಾರ, ಇಲಾಖೆ ಹಾಗೂ ಯು.ಜಿ.ಸಿ ಕಾಲಕಾಲಕ್ಕೆ ಹೊರಡಿಸಿರುವ ಆದೇಶ/ ಸುತ್ತೋಲೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

- ಬ್ಯಾಕ್‌ಲಾಗ್ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ನೇಮಕಾತಿ ಅನುಮೋದನೆಗಾಗಿ ಆಡಳಿತ ಮಂಡಳಿಯು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವಾಗ ಸದರಿ ಪ್ರಸ್ತಾವನೆಯೊಂದಿಗೆ ಆಡಳಿತ ಮಂಡಳಿಯು ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/13/ ಎಸ್‌ಬಿಸಿ/2001, ದಿನಾಂಕ:21.11.2001 ರಲ್ಲಿ ನೀಡಿರುವ ಮಾರ್ಗಸೂಚಿಗಳನ್ನು ಅನುಸರಿಸಿರುವ ಬಗ್ಗೆ, ಸದರಿ ಅಧಿಸೂಚನೆಯ ನಿಯಮ-06 ರನ್ವಯ ಪ್ರತಿಭಾ ಪಟ್ಟಿ ಸಿದ್ದಪಡಿಸಿ ಪಾರದರ್ಶಕವಾಗಿ ನೇಮಕಾತಿ ಮಾಡಿರುವ ಬಗ್ಗೆ ಹಾಗೂ ಬ್ಯಾಕ್‌ಲಾಗ್ ಹುದ್ದೆ ಭರ್ತಿಗೆ ಸಂಬಂಧಿಸಿದಂತೆ ಆಡಳಿತ ಮಂಡಳಿ ನೀಡಿರುವ ಎಲ್ಲಾ ಮಾಹಿತಿಗಳು ನಿಯಮಾನುಸಾರವಾಗಿರುವುದಾಗಿಯೂ ಒಂದು ವೇಳೆ ಈ ಬಗ್ಗೆ ಮುಂದೆ ಯಾವುದೇ ರೀತಿಯ ಅಸಂಗತತೆ ಉದ್ಭವಿಸಿದಲ್ಲಿ ಇದಕ್ಕೆ ನೇಮಕಾತಿ ಪ್ರಾಧಿಕಾರವೇ ನೇರ ಜವಾಬ್ದಾರಿಯಾಗಿರುತ್ತದೆಂದು ಆಡಳಿತ ಮಂಡಳಿಯು ಮುಚ್ಚಳಿಕೆ (Affidavit) ಸಲ್ಲಿಸುವುದು. & ಎರಡು ಪ್ರತಿಭಾ ಪಟ್ಟಿಯಲ್ಲಿನ ಎಲ್ಲಾ ಅಭ್ಯರ್ಥಿಗಳ ಸಂಪೂರ್ಣ ವಿಳಾಸ ಹಾಗೂ ಫೋನ್ ನಂಬರ್/ಮೊಬೈಲ್ ನಂಬರ್ ಗಳ ವಿವರಗಳನ್ನು ಸಲ್ಲಿಸುವುದು.

- ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳು ಸ್ವೀಕೃತವಾದ ನಂತರ ಬ್ಯಾಕ್‌ಲಾಗ್ ಹುದ್ದೆಯನ್ನು ಭರ್ತಿ ಮಾಡಲು ಆಡಳಿತ ಮಂಡಳಿಯು ಪ್ರಕಟಿಸಿರುವ ಜಾಹಿರಾತಿನಲ್ಲಿ ಕಾಲಕಾಲಕ್ಕೆ ಜಾರಿಯಲ್ಲಿರುವ ಸರ್ಕಾರಿ, ಯು.ಜಿ.ಸಿ. ಹಾಗೂ ಇಲಾಖೆಯ ಆದೇಶ, ಸುತ್ತೋಲೆ, ಮಾರ್ಗಸೂಚಿಗಳನ್ನು ಅನುಸರಿಸಲಾಗಿದೆಯೇ? ಸಂಬಂಧಪಟ್ಟ ಹುದ್ದೆಗೆ ನಿಗದಿತ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ ಹಾಗೂ ಇನ್ನಿತರೆ ಅಗತ್ಯ ಮತ್ತು ಸಂಪೂರ್ಣ ವಿವರಗಳನ್ನು ನಿಯಮಾನುಸಾರ ಜಾಹಿರಾತಿನಲ್ಲಿ ಪ್ರಕಟಿಸಲಾಗಿದೆಯೇ? ಎಂಬುದರ ಬಗ್ಗೆ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ಪರಿಶೀಲಿಸುವುದು. ಒಂದು ವೇಳೆ ಆಡಳಿತ ಮಂಡಳಿಯು ನಿಯಮಾನುಸಾರ ಜಾಹಿರಾತು ಪ್ರಕಟಿಸದಿದ್ದಲ್ಲಿ ಅಥವಾ ನೇಮಕಾತಿ ಪ್ರಕ್ರಿಯೆಯು ನಿಯಮಾನುಸಾರವಾಗಿಲ್ಲದಿದ್ದಲ್ಲಿ ಜಂಟಿ ನಿರ್ದೇಶಕರ ಹಂತದಲ್ಲೇ ಪ್ರಸ್ತಾವನೆಯನ್ನು ಹಿಂದಿರುಗಿಸಿ ಈ ಬಗ್ಗೆ ನಿಯಮಾನುಸಾರ ಯಾವ ರೀತಿ ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆ ಆಡಳಿತ ಮಂಡಳಿಗೆ ಸೂಕ್ತ ನಿರ್ದೇಶನ ನೀಡುವುದು.

- ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳು ಸ್ವೀಕೃತಗೊಂಡ ನಂತರ ಬ್ಯಾಕ್‌ಲಾಗ್ ಹುದ್ದೆಗೆ ಆಡಳಿತ ಮಂಡಳಿಯಲ್ಲಿ ಸ್ವೀಕೃತಗೊಂಡ ಅರ್ಜಿಗಳನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ಸ್ವೀಕೃತಗೊಂಡ ಅರ್ಜಿಗಳೊಂದಿಗೆ ತಾಳೆ ಮಾಡಿ ಸರಿಯಾಗಿರುವ ಬಗ್ಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರು ಖಚಿತಪಡಿಸಿಕೊಂಡು ಈ ಕಛೇರಿಗೆ ಮಾಹಿತಿ ಸಲ್ಲಿಸುವುದು.

- ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಸಂಬಂಧಪಟ್ಟ ಪ್ರಸ್ತಾವನೆಗಳನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಹಂತದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ನಿಯಮಾನುಸಾರ ಮಂಜೂರಾದ್ದ ಖಾಲಿ ಹುದ್ದೆಗೆದುರಾಗಿ ಅಭ್ಯರ್ಥಿಯ ಆಯ್ಕೆಯನ್ನು ಮಾಡಿಕೊಂಡಿರುವ ಬಗ್ಗೆ ಖಚಿತಪಡಿಸಿಕೊಂಡು ಅದಕ್ಕೆ ಸಂಬಂಧಿಸಿದಂತೆ ಮಂಜೂರಾದ ಹುದ್ದೆಗಳ ಸಂಖ್ಯೆ, ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆಗಳ ಬಗ್ಗೆ ದೃಢೀಕೃತ ದಾಖಲೆಗಳೊಂದಿಗೆ ವರದಿ ಸಲ್ಲಿಸಬೇಕು.
- ಅಭ್ಯರ್ಥಿಗಳ ಪ್ರತಿಭಾ ಪಟ್ಟಿಯನ್ನು ಮೂಲ ದಾಖಲಾತಿಗಳೊಂದಿಗೆ ಪರಿಶೀಲಿಸಿ ಎಲ್ಲಾ ಛಾಯಾ ಪ್ರತಿಗಳನ್ನು (Zerox copies) ಪ್ರಾದೇಶಿಕ ಜಂಟಿ ನಿರ್ದೇಶಕರು ದೃಢೀಕರಿಸಿ ಯಾವ ಅಭ್ಯರ್ಥಿಯ ಆಯ್ಕೆ ಅನುಮೋದನೆಯನ್ನು ಮಾಡಬೇಕು ಎಂಬುದರ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ಮತ್ತು ಸಂಪೂರ್ಣ ವರದಿಯೊಂದಿಗೆ ಕೇಂದ್ರ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕು.

- ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಅಭ್ಯರ್ಥಿಗಳ ಮೂಲ ಅಂಕಪಟ್ಟಿ & ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ಅವುಗಳ ಛಾಯಾ ಪ್ರತಿಗಳಿಗೆ ದೃಢೀಕರಿಸಿ ನಂತರ ಸದರಿ ದೃಢೀಕೃತ

ಛಾಯಾ ಪ್ರತಿಗಳನ್ನು ಪ್ರಸ್ತಾವನೆಯೊಂದಿಗೆ ಸಲ್ಲಿಸತಕ್ಕದ್ದು. ಈ ರೀತಿ ಪ್ರಸ್ತಾವನೆ ಸಲ್ಲಿಸಿದ ನಂತರ ಮೂಲ ಅಂಕಪಟ್ಟಿ/ಮೂಲ ಪ್ರಮಾಣ ಪತ್ರಗಳನ್ನು ಪ್ರಸ್ತಾವನೆಯೊಂದಿಗೆ ಕೇಂದ್ರ ಕಛೇರಿಗೆ ಸಲ್ಲಿಸುವ ಅಗತ್ಯವಿರುವುದಿಲ್ಲ.

4) ಮೇಲ್ಕಾಣಿಸಿದ ಸೂಚನೆಗಳನ್ವಯ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವುದು. ಒಂದು ವೇಳೆ ಯಾವುದಾದರೂ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿಯಾಗದಿದ್ದಲ್ಲಿ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

5) ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಅಸಹಕಾರ ತೋರುವ ಹಾಗೂ ವ್ಯಕ್ತಪಡಿಸುವ ಆಡಳಿತ ಮಂಡಳಿಯ ಪ್ರಾಂಶುಪಾಲರು ಹಾಗೂ ಸಿಬ್ಬಂದಿಗಳ ವೇತನಾನುದಾನವನ್ನು ತಕ್ಷಣದಿಂದ ಜಾರಿಗೆ ಬರುವಂತೆ ತಡೆಹಿಡಿಯಲು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆ 1989 ರಂತೆ ಅವರುಗಳ ವಿರುದ್ಧ ದಾವೆ ಸಲ್ಲಿಸುವಂತೆ ಸೂಚಿಸಲಾಗಿದೆ.

6) ಬ್ಯಾಕ್‌ಲಾಗ್ ಹುದ್ದೆಗಳ ಬಗ್ಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರು ಈ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವಾಗ ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಚೆಕ್‌ಲಿಸ್ಟ್‌ನಲ್ಲಿ (ಅನುಬಂಧ-5) ಸಂಬಂಧಪಟ್ಟ ವಿವರಗಳನ್ನು ಭರ್ತಿ ಮಾಡಿ ಅಗತ್ಯವಿರುವ ಎಲ್ಲಾ ದೃಢೀಕೃತ ದಾಖಲೆಗಳೊಂದಿಗೆ ಈ ಕಛೇರಿಗೆ ನಿಯಮಾನುಸಾರ ಪ್ರಸ್ತಾವನೆ ಸಲ್ಲಿಸತಕ್ಕದ್ದು ಹಾಗೂ ಕಛೇರಿಗೆ ಸಲ್ಲಿಸುವ ಬ್ಯಾಕ್‌ಲಾಗ್ ಹುದ್ದೆಗಳ ಪ್ರಸ್ತಾವನೆಯಲ್ಲಿ ಅಪೂರ್ಣ ಮಾಹಿತಿ ಅಥವಾ ಸುಳ್ಳು/ತಪ್ಪು ಮಾಹಿತಿ ನೀಡಿದ್ದಲ್ಲಿ ಹಾಗೂ ನಿಯಮಾನುಸಾರವಿಲ್ಲದ ನೇಮಕಾತಿಗಳನ್ನು ಅನುಮೋದಿಸಬಹುದೆಂದು ಶಿಫಾರಸ್ಸು ಮಾಡಿದ್ದಲ್ಲಿ & ಪ್ರಸ್ತಾವನೆಯಲ್ಲಿ ಇನ್ನಿತರೆ ಲೋಪಗಳು ಕಂಡು ಬಂದಲ್ಲಿ ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು ಮತ್ತು ಇದಕ್ಕೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದು.

**"ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

18.08.2022

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ,**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
5. ಹೆಚ್ಚುವರಿ ಪ್ರತಿ.
6. ಕಛೇರಿ ಪ್ರತಿ.